ಕರ್ನಾಟಕ ಸರ್ಕಾರ
(ಕಂದಾಯ ಇಲಾಖೆ)
ಉಪತಹಶೀಲ್ದಾರವರ ನ್ಯಾಯಾಲಯ, ನಾಡಕಛೇರಿ ಗುಡೇಕೋಟೆ

ಸಂ/ಕಂ/ಹ.ಬ./ನಾಕಗು/42/2015-16. ದಿನಾಂಕ:21-06-2016.

| ವಾದಿಗಳು | ಪ್ರತಿವಾದಿಗಳು |
|---|---|
| 1)ಸಣ್ಣಲಿಂಗಪ್ಪ<br>2)ಗೌರಮ್ಮ ಗಂಡ ಲೇಟ್ ಓಬಯ್ಯ<br>3)ಬಸಕ್ಕ ಗಂಡ ಲೇಟ್ ಕರಿಯಣ್ಣ<br>4)ಕಾಟಯ್ಯ ತಂದೆ ಲೇಟ್ ದೊಡ್ಡಲಿಂಗಪ್ಪ<br>5)ಬಸನ್ನ ತಂದೆ ಲೇಟ್ ದೊಡ್ಡಲಿಂಗಪ್ಪ<br>ಮೀನಕೇರಿ ಗ್ರಾಮ<br>ಕೂಡ್ಲಿಗಿ ತಾಲೂಕು | ಕಂದಾಯ ಪರಿವೀಕ್ಷಕರು<br>ಗುಡೇಕೋಟೆ |
| ಕೂಡ್ಲಿಗಿ ತಾಲೂಕು ಮೀನಕೇರಿ ಗ್ರಾಮದ ಸನಂ 392. ವಿಸ್ತೀರ್ಣ 19-57.ಎಕ್ರೆ ಜಮೀನನ್ನು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡುವ ಬಗ್ಗೆ. | |

ಪ್ರಸ್ತಾವನೆ:

ಕೂಡ್ಲಿಗಿ ತಾಲೂಕು ಮೀನಕೇರಿ ಗ್ರಾಮದ ಸನಂ 392. ವಿಸ್ತೀರ್ಣ 19-57. ಎಕ್ರೆ ಜಮೀನನ್ನು ಸದರಿ ಗ್ರಾಮದ ಕಾಟಯ್ಯ ತಂದೆ ಲೇಟ್ ದೊಡ್ಡಲಿಂಗಪ್ಪ ಇವರು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಈ ಬಗ್ಗೆ ಗ್ರಾಮಲೆಕ್ಕಿಗರು ಮೀನಕೇರಿ ಇವರು ನಮೂನೆ-21 ನೋಟಿಸನ್ನು ದಿನಾಂಕ 10-09-2015 ರಂದು ಗ್ರಾಮದಲ್ಲಿ ಪ್ರಚೂರು ಪಡಿಸಿ ಹಾಗೂ ಸಂಬಂಧಪಟ್ಟವರಿಗೆ ಜಾರಿ ಮಾಡಲಾಗಿ ವಂಶವೃಕ್ಷ ಹೊಂದಾಣಿಕೆ ಇಲ್ಲದ ಕಾರಣ ಈ ಪ್ರಕರಣವನ್ನು ಎಂ.ಆರ್.ನಂಬರ್: 10/2015-16. ದಿನಾಂಕ 11-10-2015. ರಲ್ಲಿ ಗೈರು ಮಂಜೂರು ಮುಂದಿನ ಕ್ರಮಕ್ಕೆ ಈ ಕಾರ್ಯಾಲಯಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ವಿಚಾರಣೆ ಮಾಡುವ ದಿಸೆಯಲ್ಲಿ ಉಭಯ ಪಕ್ಷದವರಿಗೂ ನೋಟಿಸ್ಸು ನೀಡಿ ದಿನಾಂಕ 19-01-2016 ರಿಂದ 21-06-2016. ರ ವರೆಗೆ ವಿಚಾರಣೆ ಮಾಡಲಾಯಿತು.

ವಿಚಾರಣೆ ಸಮಯದಲ್ಲಿ ಅರ್ಜಿದಾರರು ಹಾಜರಾಗಿರುತ್ತಾರೆ. ಅರ್ಜಿದಾರರು ಮೀನಕೇರಿ ಗ್ರಾಮದ ಸನಂ 392. ವಿಸ್ತೀರ್ಣ 19-57. ಎಕ್ರೆ ಜಮೀನು ನಮ್ಮ ತಂದೆಯವರಾದ ದೊಡ್ಡಲಿಂಗಪ್ಪ ಇವರ ಹೆಸರಲ್ಲಿ ಜಂಟಿ ಪಟ್ಟಾ ಲೆಕ್ ದಾಖಲೆ ಇರುತ್ತದೆ. ಇವರು ದಿನಾಂಕ 16-08-1980 ರಂದು ಹಾಗೂ ನಮ್ಮ ತಾಯಿಯವರಾದ ತುಪ್ಪದಮ್ಮ ಇವರು ದಿನಾಂಕ 10-04-1992 ರಂದು ಹಾಗೂ ನಮ್ಮ ಅಣ್ಣನಾದ ಓಬಯ್ಯ ತಂದೆ ದೊಡ್ಡಲಿಂಗಪ್ಪ ಇವರು 14-07-2000 ಮತ್ತು ಇನ್ನೊಬ್ಬ ಅಣ್ಣನಾದ ಕರಿಯಣ್ಣ ಇವರು ದಿನಾಂಕ 12-03-2015 ರಂದು ನಿಧನ ಹೊಂದಿರುತ್ತಾರೆ. ಕಾರಣ ಸದರಿ ನಮ್ಮ ತಂದೆಯವರಾದ ದೊಡ್ಡಲಿಂಗಪ್ಪ ಇವರ ಹೆಸರನ್ನು ಕಡಿಮೆ ಮಾಡಿ ಪೋತಿವಾರಸು ಹಕ್ಕಿನ ಪ್ರಕಾರ ನಮ್ಮಗಳ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಬೇಕೆಂದು ಕೋರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದು ಕೊಂಡು ಸದರಿ ವಿವಾದಿತ ಜಮೀನಿನ ಕಂದಾಯ ಲೆಕ್ಕಗಳನ್ನು ಪರಿಶೀಲಿಸಿ ಅರ್ಜಿದಾರರ ಹೇಳಿಕೆಗಳನ್ನು ಕೇಳಿ ವಂಶವೃಕ್ಷ ತಾಳೆ ಇಲ್ಲದ ಕಾರಣ ಈ ಕೆಳಗಿನಂತೆ ಆದೇಶ ಮಾಡಲಾಗಿದೆ.

## -:ಆದೇಶ:-

ಮೇಲೆ ವಿವರಿಸಿದ ಸಂದರ್ಭ ವಾಸ್ತುವಾಂಶ ಮತ್ತು ಕಾರಣಗಳಿಂದ ಕೂಡ್ಲಿಗಿ ತಾಲೂಕು ಮೀನಕೇರಿ ಗ್ರಾಮದ ಸನಂ 392. ವಿಸ್ತೀರ್ಣ 19-57. ಎಕ್ರೆ ಜಮೀನಿನ ಸಂಬಂದಿಸಿದ ವಂಶವೃಕ್ಷವು ತಾಳೆ ಇಲ್ಲದ ಕಾರಣ ಅರ್ಜಿದಾರರ ಕೋರಿಕೆಯನ್ನು ತಿರಸ್ಕರಿಸುತ್ತಾ ಯಥಾಸ್ಥಿತಿಯಂತೆ ಮುಂದುವರೆಸಲು ಆದೇಶಿಸಿ ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ಈ ಹಂತದಲ್ಲಿ ಮುಕ್ತಾಯಗೊಳಿಸಲು ಆದೇಶಿಸಲಾಗಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ ಬೆರಳಚ್ಚು ಮಾಡಿಸಿ ತಪ್ಪುಗಳನ್ನು ತಿದ್ದಿ ದಿನಾಂಕ 21-06-2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಗಿದೆ.

ಉಪತಹಶೀಲ್ದಾರರು
ನಾಡಕಛೇರಿ ಗುಡೇಕೋಟೆ

ಇದರ ಪ್ರತಿಯನ್ನು:

1) ಅರ್ಜಿದಾರರಾದ ಕಾಟಯ್ಯ ತಂದೆ ದೊಡ್ಡಲಿಂಗಪ್ಪ ಹಾಗೂ ಇತರರು ಮೀನಕೇರಿ ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
2) ಕಂದಾಯ ಪರಿವೀಕ್ಷಕರು ಗುಡೇಕೋಟೆ ಇವರ ಮಾಹಿತಿಗಾಗಿ ಕಳುಹಿಸಿ ಕೊಡಲಾಗಿದೆ.
3) ಗಣಕೀಕರಣ ವಿಭಾಗ ತಾಲೂಕು ಕಛೇರಿ ಕೂಡ್ಲಿಗಿ ಇವರ ಮುಂದಿನ ಕ್ರಮಕ್ಕಾಗಿ ಕಳುಹಿಸಿ ಕೊಡಲಾಗಿದೆ.
4) ಅಪೀಲು ಅವಧಿ 60 ದಿವಸ ಇರುತ್ತದೆ.